ಶ್ರವಣಬೆಳಗೊಳ ಮತ್ತು ಹಾಸನಗಳ ರಸ್ತೆಗೆ ಅದರ ಸುತ್ತಮುತ್ತಲಿನಲ್ಲಿ ಬರುವ ಎಲ್ಲಾ ರಸ್ತೆಗಳ ಅಭಿವೃದ್ಧಿಗೆ ಸೇರಿಸಿ ನಿಗದಿಪಡಿಸಲಾಗಿದೆ, ಕೇವಲ ಶ್ರವಣಬೆಳಗೊಳದ ರಸ್ತೆಗೆ ಮಾತ್ರ ಸೀಮಿತವಾಗಿಲ್ಲ. ಅದರಲ್ಲಿ ಶಿವಮೊಗ್ಗ ಜಿಲ್ಲೆಯಿಂದ ಹುಣಸೂರಿನಿಂದ ಬರುವ ರಸ್ತೆಗಳ ಅಭಿವೃದ್ಧಿಯನ್ನೂ ಇಟ್ಟುಕೊಂಡಿದ್ದೇವೆ. ಅದನ್ನು ಸೆಕ್ಟರ್‌ವೈಸ್ ಅಲೋಕೇಷನ್ಸ್ ಸಹ ಮಾಡಿದ್ದೇವೆ. ಇದನ್ನು ತಾವು ಇವತ್ತು ಪ್ರಸ್ತಾಪ ಮಾಡಿದ್ದೀರಿ. ತಮಗೆ ಇನ್ನೊಂದು ರೂಪದಲ್ಲಿ ವೈಯಕ್ತಿಕವಾಗಿ ಯಾವ್ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣವನ್ನು ಮಂಜೂರು ಮಾಡಲಾಗಿದೆಯೆಂಬ ವಿವರವನ್ನು ಕೊಡುತ್ತೇವೆ. ಕೇಂದ್ರ ಸರ್ಕಾರ ಸುಮಾರು 75 ಕೋಟಿ ರೂಪಾಯಿಗಳನ್ನು ಕೊಟ್ಟಿದೆ. ನಮ್ಮ ರಾಜ್ಯ ಸರ್ಕಾರದ ವತಿಯಿಂದ 25 ಕೋಟಿ ರೂಪಾಯಿಗಳನ್ನು ನಮ್ಮ ಹಣಕಾಸಿನ ಸಚಿವರು ನೀಡಿದ್ದಾರೆ. ಇವೆರಡೂ ಸೇರಿ ಒಟ್ಟು 100 ಕೋಟಿ ರೂಪಾಯಿಗಳಾಗುತ್ತವೆ. ಒಟ್ಟಾರೆ ಆ ಹಣದ ವಿವರವನ್ನು ತಮಗೆ ನೀಡುತ್ತೇವೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ :– ಮಲೆನಾಡು ಅಭಿವೃದ್ಧಿ ಮಂಡಳಿ ಬಗ್ಗೆ ಪೂರ್ಣವಾಗಿ ಕ್ಲಿಯರ್ ಮಾಡಬೇಕು. ತಾವು ಮನಸ್ಸು ಮಾಡಿದರೆ ಇದೇನೂ ದೊಡ್ಡದಲ್ಲ.

ಶ್ರೀ ಸಿದ್ಧರಾಮಯ್ಯ :– ಈಗ ಬಜೆಟ್ ಆಗಿ ಹೋಗಿದೆ. ಈಗ ಮೂವತ್ತು ಕೋಟಿ ರೂಪಾಯಿ ಉಳಿದಿದೆ ಎಂದು ಹೇಳಿದ್ದಾರೆ. ಹಾಗಾಗಿ ಅದನ್ನು ಮುಂದಿನ ವರ್ಷ ಗಂಭೀರವಾಗಿ ಪರಿಶೀಲನೆ ಮಾಡುತ್ತೇನೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ :– ಪರಿಶೀಲನೆ ಮಾಡುತ್ತೇವೆ ಎಂದರೆ ಹೇಗೆ ಹಣ ಬಿಡುಗಡೆ ಆಗುತ್ತದೆ?

ಶ್ರೀ ಸಿದ್ಧರಾಮಯ್ಯ :– ಪರಿಶೀಲಿಸುತ್ತೇವೆ ಅಂದರೆ ಹಣ ಬಿಡುಗಡೆ ಮಾಡುತ್ತೇವೆಂದು ಅರ್ಥ, ನಾವು ಯಾವಾಗ ಪಾಸಿಟೀವ್ ಆಗಿ ಇರುತ್ತೇವೆ. ಅಲ್ಲಿ ನೆಗೆಟಿವ್ ಆಗಿ ಇರುವಂತಹ ಪ್ರಶ್ನೆ ಬರುವುದಿಲ್ಲ. ಈ ಬಗ್ಗೆ ಜಯಪ್ರಕಾಶ್ ಹೆಗ್ಡೆಯವರ ಹತ್ತಿರ ನೀವು ಒಪಿನಿಯನ್ ತೆಗೆದುಕೊಂಡರೆ you will be satisfied, ಮಾನ್ಯ ಅಧ್ಯಕ್ಷರೇ, ಈ ಪೂರಕ ಅಂದಾಜುಗಳಿಗೆ ಮಾನ್ಯ ಸದಸ್ಯರುಗಳು ಒಪ್ಪಿಗೆ ಕೊಡಬೇಕೆಂದು, ಕೇಳಿಕೊಳ್ಳುತ್ತೇನೆ.

ಉಪಾಧ್ಯಕ್ಷರು :– 2004–05ನೇ ಸಾಲಿನ ಪೂರಕ ಅಂದಾಜುಗಳ (3ನೇ ಕಂತು) ಬೇಡಿಕೆಗಳ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ: ದಿನಾಂಕ 31–03–2005 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 5 ಹಾಗೂ 7 ರಿಂದ 29 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ

ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಒಟ್ಟು ಮೊತ್ತ ರೂ. 237581.08 ಗಳ ಮೊಬಲಗನ್ನು ಸೇರಿ ಪೂರಕ ಅಂದಾಜುಗಳ (3ನೇ ಕಂತು) ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮಂಜೂರು ಮಾಡುವುದು."

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಪೂರಕ ಅಂದಾಜು (3ನೇ ಕಂತು) ಗಳನ್ನು ಮಂಜೂರು ಮಾಡಲಾಯಿತು.

(ಮಾನ್ಯ ಉಪಾಧ್ಯಕ್ಷರ ಆದೇಶದ ಮೇರೆಗೆ ಮಂಜೂರಾದ ಪೂರಕ ಅಂದಾಜು (3ನೇ ಕಂತು)ಈ ಕೆಳಗೆ ನಮೂದಿಸಲಾಗಿದೆ)

1. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕೃಷಿ ಮತ್ತು ತೋಟಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 268.16 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

2. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಪಶುಸಂಗೋಪನೆ ಮತ್ತು ಮೀನುಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1501.36 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 400.00 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

3. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆರ್ಥಿಕ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 893.00 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 50.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

4. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಿ.ಆ.ಸು.ಇ.'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 652.75 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

5. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಒಳಾಡಳಿತ ಮತ್ತು ಸಾರಿಗೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 6176.280 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 4500.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

7. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 11441.43 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 655.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

8. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 696.41 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 265.35 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

9. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಹಕಾರ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 958.25 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 162.30 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂದು ಕೋರುತ್ತೇನೆ.

10. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಮಾಜ ಕಲ್ಯಾಣ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 2151.58 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

11. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 354.07 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 15.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

12. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 5375.85 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 6.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

13. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆಹಾರ ಮತ್ತು ನಾಗರೀಕ ಸರಬರಾಜು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ

ಲೆಕ್ಕದಲ್ಲಿ 63.16 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

14. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಂದಾಯ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1116.56 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

15. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಮಾಹಿತಿ ತಂತ್ರಜ್ಞಾನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 75.00 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 500.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

16. 2005ನೇ ಸಾಲಿನ ಮಾರ್ಚ್ 31 ರ ಅಂತ್ಯದೊಳಗಾಗಿ **'ವಸತಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 190.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

17. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಶಿಕ್ಷಣ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 23022.70 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 15.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

18. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ವಾಣಿಜ್ಯ ಮತ್ತು ಕೈಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 4091.53 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 2834.31 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

19. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ನಗರಾಭಿವೃದ್ಧಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 5312.00 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 1167.24 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

20. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಲೋಕೋಪಯೋಗಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3927.89 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 10143.37 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

21. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಜಲಸಂಪನ್ಮೂಲ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ 836.00 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 82242.80 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

22. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ 7327.84 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 84.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

22. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ 7327.84 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 84.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

23. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಾರ್ಮಿಕ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1064.58 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

24. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಇಂಧನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1515.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

25. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕನ್ನಡ ಮತ್ತು ಸಂಸ್ಕೃತಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 321.55 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 50.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

26. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 108.26 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

27. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಾನೂನು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 230.65 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

28. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 103.40 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

29. 2005ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಋಣ ಮೇಲುಸ್ತುವಾರಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 4586.88 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

ಅಧ್ಯಕ್ಷರ ಅಪ್ಪಣೆ ಮೇರೆಗೆ

ವಿಷಯ : – ಶಾಸಕರ ಕ್ಷೇತ್ರಾಭಿವೃದ್ಧಿಗೆ ಹೆಚ್ಚಿನ ಹಣ ಬಿಡುಗಡೆ :

ಶ್ರೀ ಬಿ.ಎಸ್. ಯಡಿಯೂರಪ್ಪ :– ಹಣಕಾಸಿನ ಸಚಿವರ ಗಮನ ಹರಿಸುವಂತೆ ಕೇಳಿಕೊಳ್ಳುತ್ತೇನೆ, ಈಗ ಬಜೆಟ್ ಅನ್ನು ಪಾಸ್ ಮಾಡಿಕೊಡುತ್ತೇವೆ. ಪೂರಕ ಬೇಡಿಕೆಗಳನ್ನು ಪಾಸ್ ಮಾಡಿಕೊಡಲಾಯಿತು. ಕಳೆದ ಒಂದು ವರ್ಷದಲ್ಲಿ ನೀವು ಏನೇ ಸಾವಿರಾರು ರೂಪಾಯಿಗಳ ಲೆಕ್ಕ ಹೇಳಿ, ಹೆಚ್ಚು ತೆರಿಗೆಯನ್ನು ಸಂಗ್ರಹ ಮಾಡಿದರೂ ಸಹ ನಾವಂತೂ ನಮ್ಮ ಕ್ಷೇತ್ರಗಳಲ್ಲಿ ಓಡಾಡದ ಹಾಗೆ ಆಗಿದೆ. ಒಂದೇ ಒಂದು ತಾವು ದೊಡ್ಡ ಮನಸ್ಸು